ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

9

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 22/7/2020

# ಸಾರ್ವಜನಿಕ ಲೆಕ್ಕಪತ್ರ ಸಮಿತಿ ಆನ್‌ಲೈನ್ ಸಭೆಗೆ ಎಚ್ಕೆಪಿ ಆಗ್ರಹ

**ಬೆಂಗಳೂರು:** ಕೊರೊನಾ ಸೋಂಕು ಕಾರಣ ನೀಡಿ ವಿಧಾನ ಮಂಡಲ ಸಮಿತಿಗಳ ಕಾರ್ಯನಿರ್ವಹಣೆಗೆ ತಡೆಯೊಡ್ಡಿರುವ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಅಧ್ಯಕ್ಷ ಎಚ್.ಕೆ.ಪಾಟೀಲ್ ಮಧ್ಯೆ ಜಟಾಪಟಿ ಮುಂದುವರಿದಿದೆ. ಸಮಿತಿಯ ಆನ್‌ಲೈನ್ ಸಭೆ ಮತ್ತು ಇ-ತಪಾಸಣೆಗೆ ಅವಕಾಶ ಕಲ್ಪಿಸುವಂತೆ ಪಾಟೀಲ್ ಪಟ್ಟು ಹಿಡಿದಿದ್ದಾರೆ.

ವಿಧಾನಸಭೆ ಸಭಾಧ್ಯಕ್ಷರಿಗೆ ಈ ಕುರಿತು ಪತ್ರ ಬರೆದಿರುವ ಅವರು "ಸಾರ್ವಜನಿಕ ಲೆಕ್ಕಪತ್ರ ಸಮಿತಿಯಂತಹ ವಿಧಾನಮಂಡಲದ ಮಹತ್ವದ ಸಮಿತಿ ತನ್ನ ಕರ್ತವ್ಯದಿಂದ ವಿಮುಖವಾಗಲು ಸಾಧ್ಯವಿಲ್ಲ. ಸಮಿತಿಯ ಸಭೆಗಳನ್ನು ರೂಢಿಯಂತೆ ಮತ್ತು ವಿಧಾನಮಂಡಲದ ನಿಯಮಗಳಂತೆ ನಡೆಸಲು ವೆಬೆಕ್ಸ್ ಅಥವಾ ಝೂಂ ಆ್ಯಪ್‌ನಲ್ಲಿ ಆನ್‌ಲೈನ್ ಮೂಲಕ ನಡೆಸಲು, ಇ-ತಪಾಸಣೆಗಳಿಗೆ ಅವಕಾಶ ನೀಡಬೇಕು," ಎಂದು ಆಗ್ರಹಿಸಿದ್ದಾರೆ.

"ಕೊರೊನಾ ಸೋಂಕು ಆಘಾತಕಾರಿ ಹಂತ ತಲುಪುತ್ತಿರುವ ಸಂದರ್ಭದಲ್ಲಿ ರಾಜ್ಯದಲ್ಲೂ ಅತ್ಯಂತ ಗಂಭೀರವಾದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಸನ್ನಿವೇಶದಲ್ಲಿ ವಿಧಾನಮಂಡಲದ ಸಮಿತಿಗಳು ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಬೇಕಾದ ಅವಶ್ಯಕತೆ ಇದೆ. ಹೀಗಾಗಿ ಸಭೆ ನಡೆಸಲು ಅವಕಾಶ ಕೋರಲಾಗಿತ್ತು. ಈವರೆಗೂ ಯಾವುದೇ ನಿರ್ಣಯ ಕೈಗೊಳ್ಳಲಾಗಿಲ್ಲ" ಎಂದು ಅಸಮಾಧಾನವ್ಯಕ್ತಪಡಿಸಿದ್ದಾರೆ.